**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2018–19** **ದಿನಾಂಕ: 14–02–2019**

## ಪತ್ರಿಕಾ ಆಮಂತ್ರಣ

1. Karnataka Small Scale Industries in Association with District Industries Centre, Bangalore – Urban
   Workshop on Innovation,Artificial Intelligence and Manufacturing Start –ups

   Inauguration by:

   Smt. Gunjan Krishna, IAS.,

   Commissioner, MSME Directorate of Micro, Small and Medium Enterprises, Govt. of Karnataka.

   Keynote address by:

   Dr. T.V. Prabhakar,

   Principal Research Scientist & Head of the MSME Centre of Excellence, Dept of Electronic Systems Engg, Indian Institute of Science, Bengaluru.

   Presiding by:

   Basavaraj S. Javali,
   President, KASSIA,

   Date: 15-02-2019 Friday Time: 11-00 AM.
   Venue : Kassia Auditorium, Vijayanagar, Bengaluru – 560 040

2. <u>ಕನ್ನಡ ಮತ್ತು ಸಂಸ್ಕೃತಿ ಇಲಾಖಾ ವತಿಯಿಂದ ಸಂತ ಸೇವಾಲಾಲ್‌ರವರ 280ನೇ ಜಯಂತೋತ್ಸವದ ಉದ್ಘಾಟನಾ ಸಮಾರಂಭ:</u>

**ಉದ್ಘಾಟನೆ:**

ಡಾ. ಜಿ. ಪರಮೇಶ್ವರ್,
ಉಪಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

**ಮುಖ್ಯ ಅತಿಥಿಗಳು:**

ಡಿ.ಕೆ. ಶಿವಕುಮಾರ್,
ಜಲಸಂಪನ್ಮೂಲ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.

ಪ್ರಿಯಾಂಕ್ ಎಂ. ಖರ್ಗೆ,
ಸಮಾಜ ಕಲ್ಯಾಣ ಇಲಾಖಾ ಸಚಿವರು.

ಪಿ.ಟಿ. ಪರಮೇಶ್ವರ ನಾಯ್ಕ್,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಮುಜರಾಯಿ ಸಚಿವರು

ಸಾ.ರಾ. ಮಹೇಶ್,
ಪ್ರವಾಸೋದ್ಯಮ ಹಾಗೂ ರೇಷ್ಮೆ ಸಚಿವರು.

ಕೋಟ ಶ್ರೀನಿವಾಸ ಪೂಜಾರಿ,
ವಿರೋಧ ಪಕ್ಷದ ನಾಯಕರು, ಕರ್ನಾಟಕ ವಿಧಾನ ಪರಿಷತ್,

ಶ್ರೀಮತಿ ಗಂಗಾಂಬಿಕಾ ಮಲ್ಲಿಕಾರ್ಜುನ್,
ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ.

**ಅಧ್ಯಕ್ಷತೆ:**

ಉದಯ ಬಿ. ಗರುಡಾಚಾರ್,
ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ

ದಿನಾಂಕ: 15–02–2019 ಶುಕ್ರವಾರ, ಸಮಯ : ಬೆಳಿಗ್ಗೆ 11–00 ಗಂಟೆಗೆ.

ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

# ವಿಧಾನಪರಿಷತ್ ಕಲಾಪಗಳು

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ)

ವಿಧಾನಸಭೆಯಲ್ಲಿ ತಿದ್ದುಪಡಿಗಳೊಂದಿಗೆ ಅಂಗೀಕೃತವಾಗಿದ್ದ

1) 2019ನೇ ಸಾಲಿನ ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ ವ್ಯವಸ್ಥೆಯಲ್ಲಿ ನ್ಯಾಯಯುತ ಪರಿಹಾರ ಮತ್ತು ಪಾರದರ್ಶಕತೆ (ತಿದ್ದುಪಡಿ) ವಿಧೇಯಕ ಮತ್ತು.

2) 2018ನೇ ಸಲಿನ ಕರ್ನಾಟಕ ಋಣ ಪರಿಹಾರ ವಿಧೇಯಕಗಳನ್ನು ವಿಧಾನ ಪರಿಷತ್‌ನಲ್ಲಿ ಇಂದು ಮಂಡಿಸಿ ಅಂಗೀಕರಿಸಲಾಯಿತು.

ಇದಲ್ಲದೆ ವಿಧಾನಸಭೆಯಲ್ಲಿ ಅಂಗೀಕೃತವಾಗಿದ್ದ

1. ಬಸವಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ ವಿಧೇಯಕ – 2019)
2. ಎನ್.ಐ.ಇ. ವಿಶ್ವವಿದ್ಯಾಲಯ ವಿಧೇಯಕ – 2019.
3. ಕರ್ನಾಟಕ ರಾಜ್ಯ ವಿಶ್ವ ವಿದ್ಯಾನಿಲಯಗಳ ತಿದ್ದುಪಡಿ ವಿಧೇಯಕ – 2019
4. ಅದಿಚುಂಚನಗಿರಿ ವಿಶ್ವವಿದ್ಯಾಲಯ ತಿದ್ದುಪಡಿ ವಿಧೇಯಕ – 2019
5. ಆರ್.ವಿ. ವಿಶ್ವವಿದ್ಯಾಲಯ ವಿಧೇಯಕ –2019.
6. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ–2018.

ಈ ಎಲ್ಲಾ ವಿಧೇಯಕಗಳನ್ನು ವಿಧಾನ ಪರಿಷತ್‌ನಲ್ಲಿ ಮಂಡಿಸಿ ಪರ್ಯಾಲೋಚನೆ ನಂತರ ಅಂಗೀಕಾರ ಮಾಡಲಾಯಿತು.

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ 2018 ರಲ್ಲಿ ಸರ್ಕಾರವು ಈ ಹಿಂದೆ ಇದ್ದ 5 ವರ್ಷಗಳಿಗೆ ಬದಲಾಗಿ ಕನಿಷ್ಠ 3 ವರ್ಷಗಳ ಸೇವೆ ಸಲ್ಲಿಸಿದವರನ್ನು ವರ್ಗಾವಣೆಯಡಿ ಪರಿಗಣಿಸಬಹುದಾಗಿದೆ. ಹೊಸ ವಿಧೇಯಕದನ್ವಯ ಪದವಿಪೂರ್ವ ಶಿಕ್ಷಕರ ವರ್ಗಾವಣೆ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ಹಾಗೂ ಪುರಸಭೆಗಳನ್ನು “ನಗರ ಪ್ರದೇಶ’ದ ವ್ಯಾಖ್ಯೆಯಿಂದ ಕೈ ಬಿಡಲಾಗಿದೆ.

ಶಿಕ್ಷಕರ ಕೌನ್ಸಿಲಿಂಗ್‌ನಲ್ಲಿ ಖಾಲಿ ಉಳಿದ ಸ್ಥಳಗಳಿಗೆ ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಕನಿಷ್ಠ ಅವಧಿ ಪೂರೈಸಿರುವ ಶಿಕ್ಷಕಕರನ್ನು ಅಂತಹ ಸ್ಥಳಗಳಿಗೆ ಸರ್ಕಾರ ವರ್ಗಾವಣೆ ಮಾಡಬಹುದಾಗಿರುತ್ತದೆ. ಜೊತೆಗೆ ಪತಿ–ಪತ್ನಿ ಪ್ರಕರಣಗಳಲ್ಲಿ ಪತಿ ಇಲ್ಲವೇ ಪತ್ನಿಗೆ ಅಥವಾ ಅವರ ಮಕ್ಕಳಿಗೆ ಗಂಭೀರ ಕಾಯಿಲೆ ಇದ್ದಲ್ಲಿ, ಅವರಿಗೆ ಅನುಕೂಲವಾಗುವಂತೆ ಪತಿ ಅಥವಾ ಪತ್ನಿ ಕೆಲಸ ನಿರ್ವಹಿಸುತ್ತಿರುವ ಸ್ಥಳಕ್ಕೆ ವರ್ಗಾವಣೆ ಮಾಡಲು ಸದರಿ ವಿಧೇಯಕ ಅವಕಾಶ ಕಲ್ಪಿಸಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ–2019 ರಡಿಯಲ್ಲಿ ಬೆಂಗಳೂರಿನ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು, ಮಹಾರಾಣಿ ಕಲಾ ವಾಣಿಜ್ಯ ಮತ್ತು ವ್ಯವಸ್ಥಾಪನಾ ಕಾಲೇಜು ಮತ್ತು ವಿ.ಎಚ್.ಡಿ. ಕೇಂದ್ರೀಯ ಗೃಹ ವಿಜ್ಞಾನ ಸಂಸ್ಥೆ ಇವುಗಳನ್ನು ಕ್ರೂಢೀಕರಿಸಿ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ ಸ್ಥಾಪಿಸಲು ತೀರ್ಮಾನಿಸಲಾಗಿದ್ದು, ಇವು ಬೆಂಗಳೂರಿನ ಕೇಂದ್ರೀಯ ವಿಶ್ವವಿದ್ಯಾನಿಲಯದಿಂದ ಪ್ರತ್ಯೇಕಗೊಳಿಸಲಾಗುತ್ತಿದೆ.

ಅದರಂತೆಯೇ ಮಂಡ್ಯದ ಸರ್ಕಾರಿ ಕಾಲೇಜನ್ನು (ಸ್ವಾಯತ್ತ) ಮೈಸೂರು ವಿಶ್ವವಿದ್ಯಾನಿಲಯದಿಂದ ಪ್ರತ್ಯೇಕಗೊಳಿಸಿ, ಮಂಡ್ಯ ವಿಶ್ವವಿದ್ಯಾನಿಲಯ, ಮಂಡ್ಯ ಸ್ಥಾಪಿಸಲು ಸದರಿ ಅಧಿನಿಯಮವು ಅವಕಾಶ ಕಲ್ಪಿಸಿದೆ.

## ಸ್ಪರ್ಧಾತ್ಮಕ ಪರೀಕ್ಷೆ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ರಾಜ್ಯದ ಸಿವಿಲ್ ಸೇವೆಗಳಡಿಯಲ್ಲಿ ವಿವಿಧ ಇಲಾಖೆಗಳಲ್ಲಿನ 41 ಇಲಾಖೆಗಳಲ್ಲಿನ 851 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ದಿನಾಂಕ: 11–02–2018 ರಂದು ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳನ್ನು ದಿನಾಂಕ: 07–02–2019 ರಂದು ಆಯೋಗದ ಅಂತರ್ಜಾಲ ತಾಣ http://kpsc.kar.nic.in. ದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಫೆಬ್ರವರಿ 14 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ನಾಗರೀಕ ಸರಬರಾಜು ನಿಗಮ ನಿಲಯದಲ್ಲಿನ 53+1 ಹೈ.ಕ. ಒಟ್ಟು 54 ಹಿರಿಯ ಸಹಾಯಕರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, ಅಭ್ಯರ್ಥಿಗಳನ್ನು ಆಯ್ಕೆಮಾಡಿ ತಾತ್ಕಾಲಿಕ ಆಯ್ಕೆಪಟ್ಟಿಯ ಅಧಿಸೂಚನೆಯನ್ನು ಆಯೋಗದ ವೆಬ್‌ಸೈಟ್ http://kpsc.kar.nic.in Lists-Provisional selection list ರಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಯ ಕುರಿತಂತೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ 7 ದಿವಸಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು – 560 001 ಇವರಿಗೆ ಲಿಖಿತ ಮೂಲಕ ಸಲ್ಲಿಸಲು ಸೂಚಿಸಿದೆ. ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.